# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 951

ಸದಸ್ಯರ ಹೆಸರು : ಶ್ರೀ ಎಂ. ನಾಗರಾಜು,

ಉತ್ತರಿಸುವ ಸಚಿವರು : ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು

ಉತ್ತರಿಸುವ ದಿನಾಂಕ : 24.02.2023

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಗೆ ಪ್ರಸಕ್ತ ಸಾಲಿನಲ್ಲಿ ಎಷ್ಟು ಹೊಸ ಬಸ್‌ಗಳನ್ನು ಖರೀದಿಸಲು ಉದ್ದೇಶಿಸಿದೆ; | 2022-23ನೇ ಸಾಲಿನಲ್ಲಿ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯಿಂದ 285 ವಾಹನಗಳನ್ನು ಖರೀದಿಸಲು ಉದ್ದೇಶಿಸಲಾಗಿದೆ. |
| ಆ | ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಿಂದ ಹಳೆಯ ಬಸ್ ಗಳನ್ನು ರೂ.1.00 ಲಕ್ಷದಂತೆ ಪ್ರತಿ ಬಸ್ಸಿಗೆ ಪಾವತಿಸಿ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿದೆ. |
| ಇ | ಹಳೆಯ ನಿಷ್ಕ್ರಿಯಗೊಂಡ ಬಸ್‌ಗಳನ್ನು ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಗೆ ಒದಗಿಸುವುದರಿಂದ ಉತ್ತರ ಕರ್ನಾಟಕ ಭಾಗದ ಜನತೆಗೆ ಅನ್ಯಾಯ ಮಾಡಿದಂತಾಗುವುದಿಲ್ಲವೇ; | ಸದರಿ ವಾಹನಗಳನ್ನು ಸಂಸ್ಥೆಯ ತುರ್ತು ಬೇಡಿಕೆಯನ್ನಯ ತಾತ್ಕಾಲಿಕವಾಗಿ ಪೂರೈಸಲು ಒದಗಿಸಲಾಗಿದೆ. |
| ಈ | ಸೂಕ್ತ ನಿರ್ವಹಣೆಯಿಲ್ಲದೇ ಬಳಕೆಗೆ ಯೋಗ್ಯವಲ್ಲದ ಈ ಬಸ್‌ಗಳು ಉತ್ತರ ಕರ್ನಾಟಕ ಭಾಗಗಳಲ್ಲಿ ಎಲ್ಲೆಂದರಲ್ಲಿ ಕೆಟ್ಟು ನಿಲ್ಲುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸದರಿ ವಾಹನಗಳು ಕಾರ್ಯಾಚರಣೆಗೆ ಯೋಗ್ಯವಿರುವುದನ್ನು ಖಚಿತಪಡಿಸಿಕೊಂಡು ಕಾರ್ಯಾಚರಣೆಗೆ ನೀಡಲಾಗುತ್ತಿದೆ ಹಾಗೂ ಅವುಗಳ ತಾಂತ್ರಿಕ ನಿರ್ವಹಣೆಯನ್ನು ನಿಯಮಿತವಾಗಿ ಕಾಲಕಾಲಕ್ಕೆ ನಿರ್ವಹಿಸಲಾಗುತ್ತಿದೆ |
| ಉ | ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು) | |

ಸಂಖ್ಯೆ: ಟಿಡಿ 59 ಟಿಸಿಕ್ಯೂ 2023

(ಬಿ. ಶ್ರೀರಾಮುಲು)
ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ
ಕಲ್ಯಾಣ ಸಚಿವರು

Scanned with Oken S

Scanned with OKEN Scanner